ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

## ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ




# 1 ಕೆ.ಜಿ ಪ್ಲಾಸ್ಟಿಕ್‌ಗೆ 1 ಕೆ.ಜಿ ಸಕ್ಕರೆ

## ಪ್ಲಾಸ್ಟಿಕ್ ಮುಕ್ತ ಗ್ರಾಮಕ್ಕೆ ತಡಿಬಿಡಿ ಗ್ರಾಪಂ ಸೂತ್ರ

ಪ್ಲಾಸ್ಟಿಕ್ ನಿರ್ಮೂಲನೆ ಇಂದಿನ ಬಹುದೊಡ್ಡ ಸಮಸ್ಯೆ. ಅಭಿವೃದ್ಧಿ ಜೊತೆಜೊತೆಗೆ ಬೆಳೆದುಬಂದ ಪ್ಲಾಸ್ಟಿಕ್ ಬಳಕೆ ಇಂದು ಅವನತಿಗೂ ಕಾರಣವಾದಂತಿದೆ. ನಮ್ಮ ಜೀವನದ ಅವಿಭಾಜ್ಯ ಅಂಗ ಎನ್ನುವಂತೆ ನಾವೆಲ್ಲರೂ ಪ್ಲಾಸ್ಟಿಕ್ ಬಳಕೆ ಮಾಡುತ್ತಿದ್ದೇವೆ. ಆದರೆ ಇದೇ ಪ್ಲಾಸ್ಟಿಕ್ ಜೀವಸಂಕಲಕ್ಕೆ ಮಾರಕವಾಗಿದೆ ಎನ್ನುವುದು ತಿಳಿದರೂ ಅದರ ಬಳಕೆ ಮಾತ್ರ ನಿಂತಿಲ್ಲ. ಪರಿಸರ ಮಾಲಿನ್ಯಗೊಳ್ಳಲು ನಾವೇ ಮುನ್ನುಡಿ ಬರೆದಿದ್ದೇವೆ. ಪ್ಲಾಸ್ಟಿಕ್ ವಸ್ತುಗಳು ನೀರಿನಲ್ಲಿ, ಮಣ್ಣಿನಲ್ಲಿ ಕರಗುವುದಿಲ್ಲ. ಸುಟ್ಟರೆ ವಿಷಕಾರಿ ಅನಿಲ ಹೊರಸೂಸುವ ಮೂಲಕ ವಾಯುಮಾಲಿನ್ಯಕ್ಕೂ ಕಾರಣವಾಗುತ್ತದೆ. ಹೀಗೆ ಪ್ರತಿ ಹಂತದಲ್ಲೂ ಪರಿಸರಕ್ಕೆ ಮಾರಕವಾಗಿರುವ ಪ್ಲಾಸ್ಟಿಕ್ ಅನ್ನು ಸಂಪೂರ್ಣ ನಿರ್ಮೂಲನೆ ಮಾಡುವುದು ಅಷ್ಟು ಸುಲಭದ ಮಾತಲ್ಲ. ಭಾರತದಲ್ಲಿ ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕಲು ಭಾರತ ಸರ್ಕಾರ ನಾನಾ ಪ್ರಯತ್ನ ಮಾಡುತ್ತಿದೆ. ಹಾನಿಕಾರಿ ಪ್ಲಾಸ್ಟಿಕ್ನಿಂದ ಪ್ರಕೃತಿ ಮೇಲಾಗುತ್ತಿರುವ ದುಷ್ಪರಿಣಾಮಗಳನ್ನು ತಡೆಯಲು ಮಹತ್ವಾಕಾಂಕ್ಷೆಯ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆ ಮೂಲಕ ಸರ್ಕಾರಗಳು ಶ್ರಮಿಸುತ್ತಿವೆ.

ಜಾಗತಿಕವಾಗಿ ಬಹುದೊಡ್ಡ ಸಮಸ್ಯೆಯಾಗಿರುವ ಪ್ಲಾಸ್ಟಿಕ್ ನಿರ್ಮೂಲನೆಗೆ ಮೂಲದಿಂದಲೇ ಅಂದರೆ ಗ್ರಾಮೀಣ ಮಟ್ಟದಿಂದಲೇ ಸರ್ಕಾರಿ ಹಂತದಲ್ಲಿ ಪ್ರಯತ್ನಗಳು ಸಾಗಿವೆ. ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮನೆ ಮನೆಯಿಂದ ಸ್ವಚ್ಛತಾ ವಾಹಿನಿ ಮೂಲಕ ಕಸ ಸಂಗ್ರಹಿಸಿ, ಸ್ವಚ್ಛ ಸಂಕೀರ್ಣ ಘಟಕಗಳಿಗೆ ರವಾನಿಸಿ ಪ್ಲಾಸ್ಟಿಕ್ ತ್ಯಾಜ್ಯದ ಸೂಕ್ತ ವಿಲೇವಾರಿ ಮಾಡಲಾಗುತ್ತಿದೆ. ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದ್ದು, ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ. ಹೀಗಿದ್ದೂ ಪ್ಲಾಸ್ಟಿಕ್ ನಿರ್ಮೂಲನೆ, ಬಳಕೆಗೆ ಕಡಿವಾಣ ಹಾಕುವುದು ಸವಾಲೇ ಸರಿ.

## ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಗೆ ತಡಿಬಿಡಿ ಗ್ರಾಪಂನಿಂದ ನೂತನ ಪ್ರಯೋಗ

ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಗೆ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ಸರ್ಕಾರವೇನೋ ಹಲವು ಯೋಜನೆಗಳು, ಅಭಿಯಾನಗಳು, ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದೆ. ಆದರೂ ಜನರು ಮಾತ್ರ ಎಚ್ಚೆತ್ತುಕೊಳ್ಳುತ್ತಿಲ್ಲ. ಸ್ವಚ್ಛತಾ ವಾಹಿನಿ ಮೂಲಕ ಮನೆ ಮನೆಗೆ ಬಂದು ಕಸ ವಿಲೇವಾರಿಗೆ ಕ್ರಮ ಕೈಗೊಂಡರೂ ರಸ್ತೆ ಬದಿ, ಸಾರ್ವಜನಿಕ ಸ್ಥಳಗಳಲ್ಲಿ ಪ್ಲಾಸ್ಟಿಕ್ ಎಸೆಯುವುದು ಕಡಿಮೆಯಾಗಿಲ್ಲ. ಈ ನಿಟ್ಟಿನಲ್ಲಿ ಪ್ಲಾಸ್ಟಿಕ್ ಮುಕ್ತ ಗ್ರಾಮವನ್ನು ನಿರ್ಮಿಸಲೇಬೇಕು ಎಂದು ತಡಿಬಿಡಿ ಗ್ರಾಮ ಪಂಚಾಯಿತಿ ವಿನೂತನ ಹೆಜ್ಜೆಯಿಟ್ಟಿದ್ದು, ಇಡೀ ರಾಜ್ಯಕ್ಕೆ ಮಾದರಿಯಾಗಿದೆ.

## "1 ಕೆ.ಜಿ. ಪ್ಲಾಸ್ಟಿಕ್‌ಗೆ 1 ಕೆ.ಜಿ ಸಕ್ಕರೆ"

ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ತಡಿಬಿಡಿ ಗ್ರಾಮ ಪಂಚಾಯಿತಿಯಲ್ಲಿಯೂ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ದೊಡ್ಡ ಸವಾಲಾಗಿತ್ತು. ಜೀವ ಸಂಕುಲಕ್ಕೆ ಮಾರಕವಾಗಿ ಪರಿಣಮಿಸಿರುವ ಪ್ಲಾಸ್ಟಿಕ್ ನಿರ್ಮೂಲನೆಗೆ ಇದೀಗ ಗ್ರಾಪಂ ಮಟ್ಟದಲ್ಲಿ ಹೊಸ ಪ್ರಯೋಗ ಮಾಡಲಾಗಿದೆ. **ತಡಿಬಿಡಿ ಗ್ರಾಪಂ ಪಿಡಿಒ ಗೋವಿಂದ ರಾಠೋಡ ಅವರ ನೇತೃತ್ವದಲ್ಲಿ 1 ಕೆ.ಜಿ. ಪ್ಲಾಸ್ಟಿಕ್ಗೆ 1 ಕೆ.ಜಿ ಸಕ್ಕರೆ ವಿತರಿಸುವ ವಿನೂತನ ಅಭಿಯಾನ ಆರಂಭಿಸಲಾಗಿದ್ದು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಮಲ್ಲಿಕಾರ್ಜುನ ಸಂಗ್ವಾರ ಚಾಲನೆ ನೀಡಿದ್ದಾರೆ.**

ಪ್ಲಾಸ್ಟಿಕ್ ತ್ಯಾಜ್ಯದಿಂದ ಜನ, ಜಾನುವಾರುಗಳ ಜೀವಕ್ಕೆ ಹಾನಿಯಾಗುತ್ತಿದೆ. ಪ್ರಕೃತಿಯ ಮೇಲೆ ವ್ಯತಿರಿಕ್ತ ಪರಿಣಾಮಗಳಾಗುತ್ತಿವೆ. ಜನರ ಆರೋಗ್ಯದ ದೃಷ್ಟಿಯಿಂದ ಎಲ್ಲೆಂದರಲ್ಲಿ ಪ್ಲಾಸ್ಟಿಕ್ ಬಿಸಾಕದೆ ಸರಿಯಾದ ಕ್ರಮದಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ವಿಲೇವಾರಿಗಾಗಿ ಜನರನ್ನು ಜಾಗೃತಗೊಳಿಸಲು ಈ ಅಭಿಯಾನ ಆರಂಭಿಸಿದ್ದಾರೆ. ಅದರಂತೆ ಗ್ರಾಮ ಪಂಚಾಯಿತಿಗೆ ಬಂದು ಪ್ಲಾಸ್ಟಿಕ್ ತ್ಯಾಜ್ಯವನ್ನು ನೀಡಿ ಪ್ಲಾಸ್ಟಿಕ್ಗೆ ಸಮನಾದ ತೂಕದ ಸಕ್ಕರೆ ತೆಗೆದುಕೊಂಡು ಹೋಗಬಹುದು. ಈ ಅಭಿಯಾನ ಆರಂಭವಾದ ಮೊದಲ ದಿನವೇ 25 ಕೆ.ಜಿ ಪ್ಲಾಸ್ಟಿಕ್ ಸಂಗ್ರಹವಾಗಿದೆ. ಇದಕ್ಕೆಂದೆ ತಡಿಬಿಡಿ ಗ್ರಾ.ಪಂ ಕಚೇರಿಯಲ್ಲಿ ಕ್ವಿಂಟಾಲ್ಗಟ್ಟಲೇ ಸಕ್ಕರೆ ದಾಸ್ತಾನು ಮಾಡಲಾಗಿದೆ. ಈ ಕುರಿತು ಗ್ರಾಮದಲ್ಲಿ ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಈ ನೂತನ ಪ್ರಯೋಗಕ್ಕೆ ರಾಜ್ಯಾದ್ಯಂತ ಭಾರೀ ಮೆಚ್ಚುಗೆ ವ್ಯಕ್ತವಾಗಿದ್ದು, ಗ್ರಾಮಸ್ಥರಿಂದಲೂ ಉತ್ತಮ ಸಹಕಾರ ದೊರೆಯುತ್ತಿದೆ.

ಅದಾಗ್ಯೂ ಈ ಹಾನಿಹಾರಕ ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡುವುದು ಈ ಸಮಸ್ಯೆಗೆ ಇರುವ ಏಕೈಕ ಪರಿಹಾರ. **ಏಕಬಳಕೆಯ ಪ್ಲಾಸ್ಟಿಕ್ ಚೀಲಗಳು, ಬಾಟಲಿಗಳ ಬಳಕೆಯನ್ನು ಸಂಪೂರ್ಣವಾಗಿ ನಿಲ್ಲಿಸಿ, ಬಟ್ಟೆ ಚೀಲಗಳು, ಸಾಂಪ್ರಾದಾಯಿಕ ವಸ್ತುಗಳನ್ನು ಬಳಸಲು ಆರಂಭಿಸಬೇಕು.** ಸಾಧ್ಯವಾದಷ್ಟು ಪ್ಲಾಸ್ಟಿಕ್ ಮೇಲಿನ ಅವಲಂಬನೆಯನ್ನು ಕಡಿಮೆಗೊಳಿಸಬೇಕು. ಮುಂದಿನ ಪೀಳಿಗೆಯ ಉತ್ತಮ ಭವಿಷ್ಯಕ್ಕಾಗಿ, ಪ್ರಕೃತಿಯ ಉಳಿವಿಗಾಗಿ ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕೋಣ. ಸುಸ್ಥಿರ, ಆರೋಗ್ಯಕರ ಪರಿಸರ ನಿರ್ಮಿಸೋಣ.

ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್ | ಜಲೋತ್ಸವ | ಸ್ವಚ್ಛ ಸಂಕೀರ್ಣ | ಸ್ವಚ್ಛ ಭಾರತ

8277506000 ಏಕೀಕೃತ ಸಹಾಯವಾಣಿ